# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಮಂಜುನಾಥ ಹೆಚ್. ಬಿನ್ ಹನುಮಂತಪ್ಪ ಕೆ., ಗೌನಹಳ್ಳಿ (ಪೋ), ಐಮಂಗಲ (ಹೋ), ಹಿರಿಯೂರು (ತಾ), ಚಿತ್ರದುರ್ಗ (ಜಿ) ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಶಾಖೆಯಲ್ಲಿ ಖಾಲಿ ಇರುವ ವಾಹನ ಚಾಲಕರ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 125 ಸಿಸನೇ 2002, ದಿನಾಂಕ: 27.11.2002.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಪಿಡಿ 48 ಪಿಎಸ್‌ಡಿ 2014, ದಿನಾಂಕ: 13.06.2014.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಿಆಸುಇ 78 ಸಿಸನೇ 2014, ದಿನಾಂಕ: 16.6.2014.
4. ಮಾನ್ಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿರವರ ಪತ್ರ ಸಂಖ್ಯೆ: ಕೆಎಸ್‌ಪಿಬಿ/ಎಸ್‌ಎಫ್‌ಎಸ್‌-03/470/015, ದಿ:10.06.2016.

**ಪ್ರಸ್ತಾವನೆ :**

ಮೇಲೆ ಓದಲಾದ (1)ರ ಸರ್ಕಾರಿ ಆದೇಶದಲ್ಲಿ ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಶಾಖೆಗೆ ವಾಹನ ಚಾಲಕರ ಹುದ್ದೆಯೂ ಸೇರಿದಂತೆ ಒಟ್ಟು 12 ವಿವಿಧ ಹುದ್ದೆಗಳನ್ನು ನಿಯೋಜನೆ / ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಸರ್ಕಾರದ ಮಂಜೂರಾತಿ ನೀಡಲಾಗಿದೆ.

ಮೇಲೆ ಓದಲಾದ (2) ಮತ್ತು (3)ರ ಸರ್ಕಾರದ ಅಧಿಸೂಚನೆಗಳಲ್ಲಿ ಶ್ರೀ ಸಿ.ಎಂ. ಇಬ್ರಾಹಿಂ, ಮಾಜಿ ಸಚಿವರು, ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರನ್ನಾಗಿ ನೇಮಿಸಲಾಗಿದೆ ಹಾಗೂ ಅವರಿಗೆ ಸಚಿವ ಸಂಪುಟ ದರ್ಜೆಯ ಸ್ಥಾನಮಾನವನ್ನು ನೀಡಲಾಗಿರುತ್ತದೆ.

ಶ್ರೀ ಮಂಜುನಾಥ ಹೆಚ್. ಬಿನ್ ಹನುಮಂತಪ್ಪ ಕೆ., ಗೌನಹಳ್ಳಿ (ಪೋ), ಐಮಂಗಲ (ಹೋ), ಹಿರಿಯೂರು (ತಾ), ಚಿತ್ರದುರ್ಗ (ಜಿ) ಇವರನ್ನು ರಾಜ್ಯ ಯೋಜನಾ ಮಂಡಳಿಯ ಉಪಾಧ್ಯಕ್ಷರ ಆಪ್ತ ಶಾಖೆಯಲ್ಲಿ ಖಾಲಿ ಇರುವ ವಾಹನ ಚಾಲಕರ ಹುದ್ದೆಗೆ ಗುತ್ತಿಗೆ ಆಧಾರದ ಮೇಲೆ ದಿನಾಂಕ: 01.06.2016ರಿಂದ ಜಾರಿಗೆ ಬರುವಂತೆ ನೇಮಕ ಮಾಡುವಂತೆ ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ಪತ್ರದಲ್ಲಿ ಮಾನ್ಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ಇವರು ಕೋರಿರುತ್ತಾರೆ.

ಪ್ರಸ್ತಾವನೆ ಬಗ್ಗೆ ಪರಿಶೀಲಿಸಿ, ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರಿ ಆದೇಶ ಸಂಖ್ಯೆ: ಪಿಡಿ 93 ಎಸ್‌ಪಿಬಿ 2016, ಬೆಂಗಳೂರು, ದಿನಾಂಕ: 24.08.2016.

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಮಂಜುನಾಥ ಹೆಚ್. ಬಿನ್ ಹನುಮಂತಪ್ಪ ಕೆ., ಗೌನಹಳ್ಳಿ (ಪೋ), ಐಮಂಗಲ (ಹೋ), ಹಿರಿಯೂರು (ತಾ), ಚಿತ್ರದುರ್ಗ (ಜಿ) ಇವರನ್ನು ರಾಜ್ಯ ಯೋಜನಾ ಮಂಡಳಿಯ ಮಾನ್ಯ ಉಪಾಧ್ಯಕ್ಷರ ಆಪ್ತ ಶಾಖೆಯಲ್ಲಿ ಖಾಲಿ ಇರುವ ವಾಹನ ಚಾಲಕರ ಹುದ್ದೆಗೆ ದಿನಾಂಕ: 01.06.2016ರಿಂದ ಜಾರಿಗೆ ಬರುವಂತೆ ಒಂದು ವರ್ಷದ ಅವಧಿಗೆ ಅಥವಾ ಮುಂದಿನ ಆದೇಶದವರೆಗೆ ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಲಾಗಿದೆ. ಒಪ್ಪಂದದ ನೇಮಕಾತಿಯ ನಿಬಂಧನೆ ಹಾಗೂ ಷರತ್ತುಗಳು ಈ ಕೆಳಕಂಡಂತಿವೆ.

1. ಶ್ರೀ ಮಂಜುನಾಥ ಹೆಚ್. ಬಿನ್ ಹನುಮಂತಪ್ಪ ಕೆ., ವಾಹನ ಚಾಲಕರು **ಇವರ ಗುತ್ತಿಗೆ ನೇಮಕಾತಿ ಅವಧಿಯು ದಿನಾಂಕ:01.06.2016 ರಿಂದ ಒಂದು ವರ್ಷದ ಅವಧಿಗೆ ಮಾತ್ರ ಇದ್ದು ಇದೊಂದು ತಾತ್ಕಾಲಿಕ ನೇಮಕಾತಿ ಆಗಿರುತ್ತದೆ.**

-----2

2. ಇವರ ಗುತ್ತಿಗೆ ನೇಮಕಾತಿಗೆ **ಮಾಸಿಕ ರೂ.11,600/-(ಹನ್ನೊಂದು ಸಾವಿರದ ಆರುನೂರು ರೂಪಾಯಿಗಳು ಮಾತ್ರ)** ಗಳ ಕ್ರೋಢೀಕೃತ ವೇತನವನ್ನು ನಿಗದಿ ಪಡಿಸಲಾಗಿದೆ. ಇದಲ್ಲದೆ, **ಇನ್ನಿತರ ಯಾವುದೇ ಭತ್ಯೆಗಳಿಗೂ ಇವರು ಅರ್ಹರಾಗಿರುವುದಿಲ್ಲ.**

3. ಸದರಿ ಗುತ್ತಿಗೆ ನೌಕರರು ಸಾರ್ವಜನಿಕ ಹಿತ ದೃಷ್ಟಿಯಿಂದ ಪ್ರಯಾಣ ಮಾಡಲೇ ಬೇಕಾದಲ್ಲಿ ಮಾತ್ರ ಇವರು ನೇಮಕಾತಿ ಹೊಂದಿರುವ ಹುದ್ದೆಯ ಕಾಲಿಕ ವೇತನ ಶ್ರೇಣಿಯ ಕನಿಷ್ಠ ವೇತನದ ಮೇಲೆ **ನಿಯಮಾನುಸಾರ ಲಭ್ಯವಿರುವ ಪ್ರಯಾಣಭತ್ಯೆ ಮತ್ತು ದಿನಭತ್ಯೆಯನ್ನು ಪಡೆಯಲು ಅರ್ಹರಾಗಿರುತ್ತಾರೆ.**

4. ಸದರಿ ಗುತ್ತಿಗೆ ನೌಕರರು **ವಾರ್ಷಿಕ 15 ದಿನಗಳ ಸಾಂದರ್ಭಿಕ ರಜೆಯನ್ನು ಮಾತ್ರ ಪಡೆಯಲು** ಅರ್ಹರಾಗಿರುತ್ತಾರೆ.

5. ಸಕ್ಷಮ ಪ್ರಾಧಿಕಾರದ ಅನುಮತಿ ಪಡೆಯದೇ ವೈದ್ಯಕೀಯ ಕಾರಣಗಳ ಮೇರೆಯಾಗಲೀ ಅಥವಾ ಬೇರೆ ಕಾರಣಗಳಿಂದಾಗಲೀ ಅನಧಿಕೃತ ಗೈರು ಹಾಜರಾದಲ್ಲಿ ಗುತ್ತಿಗೆ ಆಧಾರದ ನೇಮಕಾತಿಯು ತಾನಾಗಿಯೇ ರದ್ದಾಗುತ್ತದೆ.

6. ಸಕ್ಷಮ ಪ್ರಾಧಿಕಾರದ ಪೂರ್ವಾನುಮತಿ ಪಡೆದು, ವೈದ್ಯಕೀಯ ಕಾರಣಗಳ ಮೇರೆಗೆ ಅಥವಾ ಸಮರ್ಥನೀಯ ಕಾರಣಗಳ ಮೇರೆಗೆ ಗುತ್ತಿಗೆ ಆಧಾರದ ಅವಧಿಯಲ್ಲಿ ಮೂರು ತಿಂಗಳಿಗೆ ಮೀರದಂತೆ, ಗೈರುಹಾಜರಾದಲ್ಲಿ ಆ ಕಾರಣದಿಂದ ಗುತ್ತಿಗೆ ನೇಮಕಾತಿ ರದ್ದಾಗುವುದಿಲ್ಲ. ಅಂದರೆ, ಈ ಅವಧಿಯನ್ನು ಕರ್ತವ್ಯ ರಹಿತ ದಿನಗಳೆಂದು (ಡೈಸ್ ನಾನ್) ಪರಿಗಣಿಸಲಾಗುವುದು ಮತ್ತು ಅವರು ಈ ಅವಧಿಗೆ ಯಾವುದೇ ವೇತನ ಮತ್ತು ಇತರೆ ಸೌಲಭ್ಯಗಳಿಗೆ ಅರ್ಹರಿರುವುದಿಲ್ಲ.

7. ಒಪ್ಪಂದದ ಷರತ್ತು ಮತ್ತು ನಿಬಂಧನೆಗಳಲ್ಲಿ ನೀಡಿರುವ ಸೌಲಭ್ಯಗಳ ಹೊರತಾಗಿ **ಬೇರಾವುದೇ ಸೌಲಭ್ಯಕ್ಕೆ ಅಂದರೆ ವೇತನ ಬಡ್ತಿ, ಪದೋನ್ನತಿ, ಪಿಂಚಣಿ ಇತ್ಯಾದಿ ಸೌಲಭ್ಯಗಳಿಗೆ ಸದರಿ ಗುತ್ತಿಗೆ ನೌಕರರು ಅರ್ಹರಾಗಿರುವುದಿಲ್ಲ.**

8. ಸದರಿ ನೌಕರರ ದುರ್ವರ್ತನೆ, ನಿರ್ಲಕ್ಷತೆಯ ನಿಮಿತ್ತ ಸರ್ಕಾರಕ್ಕೆ ನಷ್ಟವು ಉಂಟಾದಲ್ಲಿ ಈ ಎಲ್ಲಾ ನಷ್ಟಗಳನ್ನು ಸದರಿ ನೌಕರರು ಭರಿಸಿಕೊಡಲು ಬದ್ಧರಾಗಿರತಕ್ಕದ್ದು.

9. ಸದರಿ ಗುತ್ತಿಗೆ ನೇಮಕಾತಿಯನ್ನು **ಯಾವುದೇ ಕಾರಣಕ್ಕೂ ಖಾಯಂ** ಎಂದು **ಪರಿಗಣಿಸಲಾಗುವುದಿಲ್ಲ.**

10. ಇವರ ಕರ್ತವ್ಯ, ಕಾರ್ಯ ಮತ್ತು ಪ್ರಕಾರ್ಯಗಳನ್ನು ಶ್ರದ್ಧೆ, ಭಕ್ತಿ ಮತ್ತು ಆಸಕ್ತಿಯಿಂದ ಇವರು ನೆರವೇರಿಸುವುದು.

11. ಇವರು ಕರ್ತವ್ಯವನ್ನು ಪಾಲಿಸುತ್ತಿರುವಾಗ ಅಥವಾ ನೆರವೇರಿಸುತ್ತಿರುವಾಗ ಇವರಿಗೆ ಲಭ್ಯವಾಗಬಹುದಾದ ಅಥವಾ ದೊರಕಬಹುದಾದ ಅಧಿಕೃತ ಮಾಹಿತಿಯನ್ನು ಗೌಪ್ಯವಾಗಿಟ್ಟು ಕಟ್ಟುನಿಟ್ಟಾಗಿ ಪಾಲಿಸಬೇಕು.

12. 1966ರ ಕರ್ನಾಟಕ ನಾಗರೀಕ ಸೇವಾ(ನಡತೆ) ನಿಯಮಾವಳಿ ಮತ್ತು 1957ರ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗೆ ಇವರು ಬದ್ಧರಾಗಿರುತ್ತಾರೆ.

13. ಈ ಒಪ್ಪಂದದ ಷರತ್ತುಗಳನ್ನು ಉಲ್ಲಂಘಿಸಿದಲ್ಲಿ ಗುತ್ತಿಗೆ ನೇಮಕಾತಿಯು ತಾನಾಗಿಯೇ ಮುಕ್ತಾಯವಾಗುತ್ತದೆ.

14. ಈ ಆದೇಶವನ್ನು ಸ್ವೀಕರಿಸಿದ ದಿನಾಂಕದಿಂದ ಏಳು ದಿನಗಳೊಳಗಾಗಿ ರೂ.50/- (ಐವತ್ತು ರೂಪಾಯಿಗಳು)ಗಳ ಮೌಲ್ಯದ ಛಾಪಾ ಕಾಗದದಲ್ಲಿ ಸದರಿ ನೇಮಕಾತಿಯ ಷರತ್ತು ಮತ್ತು ನಿಬಂಧನೆಗಳನ್ನು ಒಳಗೊಂಡಿರುವ ಕರಾರು ಪತ್ರವನ್ನು ಕ್ರಮಬದ್ಧ ರೀತಿಯಲ್ಲಿ ಸದರಿ ನೌಕರರು ತಮ್ಮ ಒಪ್ಪಿಗೆಯನ್ನು ನಮೂದಿಸಿ ಸಲ್ಲಿಸತಕ್ಕದ್ದು ಹಾಗೂ ವಿದ್ಯಾರ್ಹತೆಯ ಮೂಲ ಪ್ರತಿಗಳನ್ನು ಹಾಗೂ ಡ್ರೈವಿಂಗ್ ಲೈಸನ್ಸ್‌ನ್ನು ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲತಾ)
ಸರ್ಕಾರದ ಅಧೀನ ಕಾರ್ಯದರ್ಶಿ-3
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಇಲಾಖೆ.

**ಪ್ರತಿಗೆ:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ5398, ಬೆಂಗಳೂರು-01.
2. ಮಾನ್ಯ ಉಪಾಧ್ಯಕ್ಷರ ಆಪ್ತ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ಕಾರ್ಯದರ್ಶಿ ಮತ್ತು ಸದಸ್ಯ ಕಾರ್ಯದರ್ಶಿ, ರಾಜ್ಯ ಯೋಜನಾ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
6. ಸಂಶೋಧನಾ ಸಮಾಲೋಚಕರು, ರಾಜ್ಯ ಯೋಜನಾ ಮಂಡಳಿ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಉಪ ಕಾರ್ಯದರ್ಶಿ (ಆಡಳಿತ), ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
9. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-6) ವಿಧಾನ ಸೌಧ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಎಸ್-1 & 2 ಯೋಜನೆ, ಕಾರ್ಯಕ್ರಮ, ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು-01.ಕಾಂಪೆಂಡಿಯಂಗಾಗಿ.
11. ಶ್ರೀ ಮಂಜುನಾಥ ಹೆಚ್. ಬಿನ್ ಹನುಮಂತಪ್ಪ ಕೆ., ಗೌನಹಳ್ಳಿ (ಪೋ), ಐಮಂಗಲ (ಹೋ), ಹಿರಿಯೂರು (ತಾ), ಚಿತ್ರದುರ್ಗ (ಜಿ) ಇವರು ವಿದ್ಯಾರ್ಹತೆಯ ಮೂಲ ಪ್ರತಿಗಳನ್ನು ಹಾಗೂ ಡ್ರೈವಿಂಗ್ ಲೈಸನ್ಸ್‌ನ್ನು ಶಾಖೆಯಲ್ಲಿ ತೋರಿಸಿ, ಜೆರಾಕ್ಸ್ ಪ್ರತಿಗಳನ್ನು ಈ ಶಾಖೆಗೆ ಕೂಡಲೇ ಬಂದು ನೀಡುವಂತೆ ಸೂಚಿಸಿದೆ.
12. ಸಹಾಯಕ ಖಜಾನಾಧಿಕಾರಿ, ರಾಜ್ಯ ಯೋಜನಾ ಮಂಡಳಿ, ಎಸ್-3.
13. ಶಾಖಾ ರಕ್ಷಾ ಕಡತ ಹಾಗೂ ಹೆಚ್ಚುವರಿ ಪ್ರತಿಗಳು.